Office of the Additional Commissioner of Commercial Taxes
981 04 AUG 2022

ಕರ್ನಾಟಕ ಸರ್ಕಾರ
ವಾಣಿಜ್ಯ ತೆರಿಗೆ ಇಲಾಖೆ

ಸಂಖ್ಯೆ:ವಾತೆಜಂಆ(ಆ)/ವಿ.ಸ.ಸೇ.ತೆ.ಕ-5/ವಾಹನ/ಸಿಆರ್-16/2022-23

TNO-631/22.23

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರ ಕಛೇರಿ (ಆಡಳಿತ),
ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-5,
ಕೊಠಡಿ ಸಂ.501, 'ಬಿ' ಬ್ಲಾಕ್, ವಿಟಿಕೆ-2, ರಾಜೇಂದ್ರನಗರ,
ಕೋರಮಂಗಲ, ಬೆಂಗಳೂರು-560047,
ದಿನಾಂಕ: 03-08-2022

ADCOM (e-Governance) Bengaluru

AC e-gov

# ಟೆಂಡರ್ ಅಧಿಸೂಚನೆ

**ವಿಷಯ :** ದಿನಾಂಕ: 01-09-2022 ರಿಂದ 31-03-2022ರ ಅವಧಿಯವರೆಗೆ ಈ ಕಛೇರಿಗೆ ಸಾಮಾನ್ಯ ಟೆಂಡರ್ ಪ್ರಕ್ರಿಯೆ ಮುಖೇನ 11 ಖಾಸಗಿ ವಾಹನಗಳನ್ನು ಬಾಡಿಗೆಗೆ ಪಡೆದುಕೊಳ್ಳುವ ಬಗ್ಗೆ.

**ಉಲ್ಲೇಖ :** 1) ಸರ್ಕಾರದ ಆದೇಶ ಸಂ. ಸಿಆಸುಇ 96 ಶಿವಾನೀ 2012, ಬೆಂಗಳೂರು, ದಿನಾಂಕ: 23-08-2012.

2) ಮಾನ್ಯ ವಾಣಿಜ್ಯ ತೆರಿಗೆಗಳ ಆಯುಕ್ತರವರ ಪತ್ರ ಸಂ.ವಿಹೆಚ್‌ಟಿ/ಸಿಆರ್-15/2022-23, ದಿನಾಂಕ: 01-08-2022.

* * * * *

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು (ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-5, ಬೆಂಗಳೂರು, ಈ ಕಛೇರಿಯ ಉಪಯೋಗಕ್ಕಾಗಿ 11 (ಹನ್ನೊಂದು) ಖಾಸಗಿ ವಾಹನಗಳನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಪಡೆಯಲು ಉಲ್ಲೇಖದಲ್ಲಿ ತಿಳಿಸಿರುವ ಮಾನ್ಯ ಆಯುಕ್ತರ ಪತ್ರದಲ್ಲಿ ಅನುಮತಿಸಿರುವುದರಿಂದ, ಮಾಲೀಕರೇ ಚಾಲಕರಾಗಿರುವವರಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಆಸಕ್ತ ಒಬ್ಬ ವಾಹನ ಮಾಲೀಕ/ಚಾಲಕರು, ಒಂದು ವಾಹನ ಸೇವೆಗೆ ಮಾತ್ರ ಅರ್ಜಿಯನ್ನು ಸಲ್ಲಿಸುವುದು. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 96 ಶಿವಾನೀ 2012, ದಿ:23.08.2012 ರಲ್ಲಿ ತಿಳಿಸಿರುವ ನಿಯಮಗಳನ್ವಯ ಖಾಸಗಿ ವಾಹನಗಳ ಸೇವೆಯನ್ನು ಪಡೆಯಲಾಗುವುದು.

1. ಸರ್ಕಾರದ ಆದೇಶ ಸಂಖ್ಯೆ: ಆಇ 156 ವೆಚ್ಚ-12 2019, ಬೆಂಗಳೂರು, ದಿನಾಂಕ: 22.03.2022ರ ಅನ್ವಯ ವಾಹನಗಳ ಬಾಡಿಗೆ ತಿಂಗಳಿಗೆ ಮೊತ್ತ ಹವಾ ನಿಯಂತ್ರಣ ರಹಿತ ವಾಹನಗಳಿಗೆ ರೂ.35,000-00ಗಳನ್ನು ಮತ್ತು ಹವಾ ನಿಯಂತ್ರಿತ ವಾಹನಗಳಿಗೆ ರೂ.40,000-00ಗಳನ್ನು ನೀಡಲಾಗುವುದು.
2. ವಾಹನದ ಮಾದರಿಯು 2017 ಮತ್ತು ನಂತರದಾಗಿರತಕ್ಕದ್ದು, ಪ್ರತಿ ವಾಹನದ ಗುಣಮಟ್ಟವನ್ನು ಹಾಗೂ ಚಾಲನ ಕೌಶಲ್ಯವನ್ನು ಪರಿಶೀಲಿಸಿದ ನಂತರವೇ ವಾಹನಗಳನ್ನು ತೆಗೆದುಕೊಳ್ಳಲಾಗುವುದು
3. ದಿನಾಂಕ: 01-08-2022 ರಿಂದ ಅನ್ವಯವಾಗುವಂತೆ ಈ ಹಿಂದೆ ಸತತವಾಗಿ 5 ವರ್ಷಗಳ ಕಾಲ ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ಯಾವುದೇ ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳ ಅರ್ಜಿಗಳನ್ನು ಪರಿಗಣಿಸುವುದಿಲ್ಲ.
4. ಗುತ್ತಿಗೆಯ ಅವಧಿ ದಿನಾಂಕ 01-09-2022 ರಿಂದ 31-03-2023 ರವರೆಗೆ

ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ **20.08.2022 ಸಂಜೆ 5.00 ಘಂಟೆಯವರೆಗೆ.** ಆ ನಂತರ ಸಲ್ಲಿಸಿದ ಅರ್ಜಿಗಳನ್ನು ಪುರಸ್ಕರಿಸಲಾಗುವುದಿಲ್ಲ.

ಅರ್ಹಗೊಂಡ ಮಾಲೀಕರೇ ಚಾಲಕರಾಗಿರುವ ವಾಹನ ಮಾಲೀಕ/ಚಾಲಕರ ವಿವರವನ್ನು ಇಲಾಖೆಯ ಸೂಚನಾ ಫಲಕ ಹಾಗೂ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.